## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 763
2. ಸದಸ್ಯರ ಹೆಸರು : ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 13.03.2025.
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ದಿನಾಂಕ:31.01.2025ರ ಅನ್ವಯ ಕರ್ನಾಟಕ ಸರ್ಕಾರದಲ್ಲಿ ಖಾಲಿ ಇರುವ "ಎ", "ಬಿ", "ಸಿ" ಹಾಗೂ "ಡಿ" ಶ್ರೇಣಿಯ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | 2024-25ನೇ ಸಾಲಿನಲ್ಲಿ ಮಂಜೂರಾದ, ಖಾಲಿಯಿರುವ ಹಾಗೂ ಭರ್ತಿಯಾಗಿರುವ ಹುದ್ದೆಗಳ ವಿವರಗಳನ್ನು ಅನುಬಂಧದಲ್ಲಿ ನೀಡಿದೆ. |
| ಆ | ಹೆಚ್ಚಿನ ಸಂಖ್ಯೆಯ ಖಾಲಿ ಹುದ್ದೆಗಳ ಕಾರಣದಿಂದಾಗಿ ಸರ್ಕಾರದ ಹಲವಾರು ಇಲಾಖೆಯ ಕೆಲಸ ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಖಾಲಿ ಹುದ್ದೆ ಭರ್ತಿಗೆ ಸರ್ಕಾರ ಕ್ರಮ ಕೈಗೊಳ್ಳುವುದೆ; ಹಾಗಿದ್ದಲ್ಲಿ, ಕಾಲಮಿತಿಯ ಕಾರ್ಯಯೋಜನೆಯನ್ನೇನಾದರೂ ಹೊಂದಿದೆಯೇ? (ವಿವರ ಒದಗಿಸುವುದು) | ರಾಜ್ಯದ ವಿವಿಧ ಇಲಾಖೆಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ:7,80,748 ಭರ್ತಿಯಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ:5,04,362 ಮತ್ತು ಒಟ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ:2,76,386 ಆಗಿರುತ್ತದೆ. ಇದರಲ್ಲಿ, 2005 ನೇ ಸಾಲಿನಿಂದ ಸಿಬ್ಬಂದಿ ಮತ್ತು ಆಡಳಿತ ಇಲಾಖೆಯ ಸುತ್ತೋಲೆ ಅನ್ವಯ ವಾಹನ ಚಾಲಕರು ಮತ್ತು ಗ್ರೂಪ್-ಡಿ ವೃಂದಗಳಲ್ಲಿ ಖಾಲಿ ಇರುವ ಖಾಲಿಯಾಗುವ ಹುದ್ದೆಗಳನ್ನು ಬಾಹ್ಯ ಮೂಲಗಳ ಮುಖಾಂತರ ಪೂರೈಸಲು ಸೂಚಿಸಲಾಗಿದೆ. ಅಂದರೆ, ಸದರಿ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿಮಾಡಲಾಗುತ್ತಿಲ್ಲ.<br><br>ನೇರ ನೇಮಕಾತಿಗೆ ಸಂಬಂಧಿಸಿದಂತೆ, ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆ ಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ, ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ, ಅಗತ್ಯತೆಗೆ ಅನುಗುಣವಾಗಿ ಹುದ್ದೆಗಳ ಭರ್ತಿಗೆ ಸಹಮತಿ ನೀಡಲಾಗುತ್ತಿದೆ. 2024-25ನೇ ಸಾಲಿನಲ್ಲಿ ವಿವಿಧ ಇಲಾಖೆಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ, ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಸಹಮತಿಸಲಾಗಿದೆ. ಉದಾಹರಣೆಗೆ: ಶಿಕ್ಷಣ ಇಲಾಖೆ -5267, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ-1725, ಅಬಕಾರಿ ಇಲಾಖೆ-1207, ಕಂದಾಯ ಇಲಾಖೆ-500, ಒಳಾಡಳಿತ ಇಲಾಖೆ 545, ಸಮಾಜ ಕಲ್ಯಾಣ ಇಲಾಖೆ-875, ವಾಣಿಜ್ಯ ತೆರಿಗೆ ಇಲಾಖೆ- 112 ಇತ್ಯಾದಿ. |

| | | |
|---|---|---|
| | | ಮುಂದುವರೆದು, ಸಿಆಸು ಇಲಾಖೆಯ ದಿನಾಂಕ: 26.07.2005ರ ಸುತ್ತೋಲೆ ಅನ್ವಯ ಗ್ರೂಪ್-ಸಿ ವೃಂದದ ಕೆಲವು ಹುದ್ದೆ (ಶೀಘ್ರಲಿಪಿಗಾರರು, ಬೆರಳಚ್ಚುಗಾರರು, ವಾಹನ ಚಾಲಕರು ಮತ್ತು ಗ್ರೂಪ್-ಡಿ ವೃಂದಗಳನ್ನು) ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ತಿಳಿಸಲಾಗಿದೆ. ಅದರಂತೆ, ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ, ಅಂದಾಜು 96,844 ಹುದ್ದೆಗಳನ್ನು (ಶೀಘ್ರಲಿಪಿಗಾರರು, ಬೆರಚ್ಚುಗಾರರು, ವಾಹನ ಚಾಲಕರು ಮತ್ತು ಗ್ರೂಪ್-ಡಿ ಸಮಾನಾಂತರ) ಮತ್ತು ತಾಂತ್ರಿಕ ಹುದ್ದೆಗಳನ್ನು ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ಪಡೆದು ವೆಚ್ಚ ಭರಿಸಲಾಗುತ್ತಿದೆ.<br><br>ಜೊತೆಗೆ, ಅಗತ್ಯತೆಗೆ ಅನುಗುಣವಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ ಅರ್ಹ ಸಿಬ್ಬಂದಿ/ಅಧಿಕಾರಿಗಳನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿ, ಪ್ರಭಾರ ಭತ್ಯೆಗಳನ್ನು ನೀಡಿ ಸಾರ್ವಜನಿಕರಿಗೆ ಸೇವೆಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ: ಆಇ 29 ಬಿಜಿಎಲ್ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ

# ಅನುಬಂಧ

| | 2024-25ನೇ ಸಾಲಿನಲ್ಲಿ ವರ್ಗವಾರು ಮಂಜೂರಾದ, ಖಾಲಿಯಿರುವ ಹಾಗೂ ಭರ್ತಿಯಾದ ಹುದ್ದೆಗಳ ಸಂಖ್ಯೆ | | | | | | | | | | | | | | |
|---|---|---|---|---|---|---|---|---|---|---|---|---|---|---|---|
| ವಿವರ | ಮಂಜೂರಾದ ಹುದ್ದೆಗಳು | | | | | ಖಾಲಿಯಿರುವ ಹುದ್ದೆಗಳು | | | | | ಭರ್ತಿಯಾಗಿರುವ ಹುದ್ದೆಗಳು | | | | |
| ಶ್ರೇಣಿ | A | B | C | D | ಒಟ್ಟು | A | B | C | D | ಒಟ್ಟು | A | B | C | D | ಒಟ್ಟು |
| ಸಂಖ್ಯೆ | 42036 | 45081 | 584052 | 109579 | 780748 | 16017 | 16734 | 166021 | 77614 | 276386 | 26019 | 28347 | 418031 | 31965 | 504362 |